## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

**ಸಿಸಿ ನಂ. *245/2020***

ಚಾಸಾ-07 ಫ್ರಾಸಾ-06

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣೀಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 12.03.2025

| | | |
|---|---|---|
| ಹೆಸರು | : | ಜೀವನ |
| ತಂದೆಯ ಹೆಸರು | : | ಶಿವಲಾಲ |
| ವಯಸ್ಸು | : | 20 ವರ್ಷ |
| ಉದ್ಯೋಗ | : | ವಿದ್ಯಾರ್ಥಿ |
| ವಾಸಸ್ಥಳ | : | ದೇಸಾಯಿ ಕಲ್ಲೂರ ತಾಂಡಾ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

ಚಾಸಾ-6 ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಜಪ್ತಿ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**16** ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**16**(ಬಿ) ಎಂದು ಗುರುತಿಸಲಾಯಿತು.

ನಮ್ಮೂರಿಗೆ ಒಂದು ದಿನ ಪೋಲಿಸರು ಬಂದಿದ್ದು, ಅವರು ಸಹಿ ಮಾಡು ಅಂತಾ ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲಾ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 21.10.2019 ರಂದು ಪೋಲಿಸ ಠಾಣೆಯಲ್ಲಿ ನನ್ನ ಹಾಗು ಚಾಸಾ-6 ರವರ ಸಮಕ್ಷಮ ಒಂದು ಕಪ್ಪು ಮತ್ತ ಸಿಲ್ವರ ಬಣ್ಣದ ಒಂದು Hero Splendor Pro ನ್ನು ಮೋಟಾರ ಸೈಕಲನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿ.

ಸಾಕ್ಷಿಗೆ ಜಪ್ತಿ ಪಡಿಸಿಕೊಂಡರು ಎಂದು ಹೇಳುವ ಮೋಟಾರ ಸೈಕಲ ಭಾವಚಿತ್ರವನ್ನು ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಭಾವಚಿತ್ರಗಳನ್ನು ಈಗಾಗಲೇ ನಿಪಿ-2 ರಿಂದ 5 ಎಂದು ಗುರುತಿಸಲಾಗಿರುತ್ತದೆ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **CSH** ವಕೀಲರಿಂದಃ-</u>

ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲಾ ಎಂದರೆ ಸರಿ. ಸಹಿ ಮಾಡು ಅಂತಾ ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿ. ನಿಪಿ-16 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲಾ ಎಂದರೆ ಸರಿ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)
ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ

<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ. ***245/2020***</u>

ಚಾಸಾ-06 ಫ್ರಾಸಾ-05

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 12.03.2025

| | | |
|---|---|---|
| ಹೆಸರು | : | ವಿಕ್ರಮ |
| ತಂದೆಯ ಹೆಸರು | : | ಸೇವು |
| ವಯಸ್ಸು | : | 26 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ದೇಸಾಯಿ ಕಲ್ಲೂರ ಗ್ರಾಮ |

-: <u>ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-</u>

ಚಾಸಾ-7 ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಜಪ್ತಿ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**16** ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**16**(ಎ) ಎಂದು ಗುರುತಿಸಲಾಯಿತು.

ಒಂದು ದಿನ ಪೋಲಿಸರು ಪಂಚನಾಮೆ ಮಾಡುವ ಕುರಿತು ಬಂದಿದ್ದು, ಆಗ ನಾನು ಸಹಿ ಮಾಡಿರುತ್ತೇನೆ. ನನಗೆ ಏನು ಪಂಚನಾಮೆ ಮಾಡಿರುತ್ತಾರೆ ಎಂದು ಗೊತ್ತಿಲ್ಲಾ, ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತಿ ಪಡಿಸಿಕೊಂಡಿಲ್ಲಾ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 21.10.2019 ರಂದು ಪೋಲಿಸ ಠಾಣೆಯಲ್ಲಿ ನನ್ನ ಹಾಗು ಚಾಸಾ-7 ರವರ ಸಮಕ್ಷಮ ಒಂದು ಕಪ್ಪು ಮತ್ತ ಸಿಲ್ವರ ಬಣ್ಣದ ಒಂದು Hero Splendor Pro ನ್ನು ಮೋಟಾರ ಸೈಕಲನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **CSH** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ